ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ಬೀದರ್ ಜಿಲ್ಲೆಯಲ್ಲಿ ಎನ್.ಹೆಚ್.ಎಮ್. ಯೋಜನೆಯಡಿಯಲ್ಲಿ ನೇಮಕಾತಿ ಬಗ್ಗೆ

ಶ್ರೀ ಅರವಿಂದಕುಮಾರ್ಅರಳಿ(ವಿಧಾನಸಭೆಯಿಂದಚುನಾಯಿತರಾದವರು):-

55 (150) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2017-18 ರಿಂದ 2019-20ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಎನ್.ಹೆಚ್.ಎಮ್. ಯೋಜನೆಯಡಿಯಲ್ಲಿ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು; ಹಾಗೂ ಈ ಯೋಜನೆಯಡಿಯಲ್ಲಿ ಎಷ್ಟು ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲಾಗಿದೆ; (ಅಧಿಸೂಚನೆಯ ಪ್ರತಿಯೊಂದಿಗೆ ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) 2017-18 ರಿಂದ 2019-20ನೇ ಸಾಲಿನಲ್ಲಿ ಜಿಲ್ಲೆಯಲ್ಲಿ ಹೊರ ಗುತ್ತಿಗೆ ಆಧಾರದ ಮೇಲೆ `ಡಿ' ಗ್ರೂಪ್ ನೌಕರರ ನೇಮಕಾತಿ ಮಾಡಲಾಗಿದೆಯೇ; ಮಾಡಿದ್ದಲ್ಲಿ, ಯಾವ ನಿಯಮದ ಪ್ರಕಾರ ಮತ್ತು ಯಾವ ಆಧಾರದ ಮೇಲೆ ಯಾರ ಅಧ್ಯಕ್ಷತೆಯಲ್ಲಿ ನೇಮಕಾತಿ ಮಾಡಲಾಗಿದೆ; ಆ ನೇಮಕಾತಿಗೆ ಪತ್ರಿಕಾ ಪ್ರಕಟಣೆ ಹೊರಡಿಸಲಾಗಿದೆಯೇ; ಹೊರಡಿಸಿದ್ದಲ್ಲಿ, ಅದರ ಸಂಪೂರ್ಣವಾದ ಮಾಹಿತಿ ಒದಗಿಸುವುದು ;

(ಇ) ನಗರದಲ್ಲಿ ನಿಯಮಾನುಸಾರ ವಿಶೇಷ ನೇಮಕಾತಿ ಸಮಿತಿ ಮೂಲಕ ಅಧಿಸೂಚನೆ ಹೊರಡಿಸಿ ಸದರಿ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿ ಮೆರಿಟ್ ಮತ್ತು ಮೀಸಲಾತಿ ಆಧಾರದ ಮೇಲೆ ನೇಮಕಾತಿ ಮಾಡಲಾಗಿದೆಯೇ ? (ಮೆರಿಟ್ ಲಿಸ್ಟನ ಸಂಪೂರ್ಣವಾದ ಮಾಹಿತಿ ನೀಡುವುದು)